ಅ) ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳು 514.

ಆ) ಈ ಖಾಲಿ ಇರುವ ಹುದ್ದೆಗಳಲ್ಲಿ ವಿಶೇಷ ನೇರ ನೇಮಕಾತಿ ಮುಖಾಂತರ 500 ವೈದ್ಯಾಧಿಕಾರಿಗಳ ಹುದ್ದೆ ಭರ್ತಿ ಮಾಡಲು ಸರ್ಕಾರದ ಅನುಮತಿ ನೀಡಿದ್ದು, ಮೊದಲನೇ ಹಂತದಲ್ಲಿ 250 ವೈದ್ಯಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ. 2ನೇ ಹಂತದಲ್ಲಿ 250 ವೈದ್ಯಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡಲು ಸಂದರ್ಶನಗಳನ್ನು ನಡೆಸಲಾಗಿದ್ದು ನೇಮಕಾತಿ ಪ್ರಕ್ರಿಯೆ ಅಂತಿಮ ಹಂತದಲ್ಲಿರುತ್ತದೆ. ಖಾಲಿ ಇರುವ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಆಯಾಯಾ ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ ಮತ್ತು ಎಮ್.ಬಿ.ಬಿ.ಎಸ್. ವೈದ್ಯರು ಇಲ್ಲದ ಕಡೆ ಆಯುಷ್ ವೈದ್ಯರನ್ನು ನೇಮಕ ಮಾಡಲಾಗುತ್ತಿದೆ.

ವಿಶೇಷ ಘಟಕ ಯೋಜನೆಯಡಿಯಲ್ಲಿ ಖರ್ಚು ಮಾಡಲಾದ ಹಣ

1100 (1263) ಶ್ರೀ ಚನ್ನಬಸವರಾಜ್ (ಅಪ್ಪಾಜಿ) ಶಂಕರರಾವ್ ನಾಡಗೌಡ (ಮುದ್ದೇಬಿಹಾಳ).– ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.–

ಅ) ವಿಶೇಷ ಘಟಕ ಯೋಜನೆಯಡಿಯಲ್ಲಿ 2006–07ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಕೇಂದ್ರ ಸರ್ಕಾರದಿಂದ ಬಂದಿರುವ ನೆರವಿನ ಪ್ರಮಾಣವೆಷ್ಟು;

ಆ) ಈ ಹಣವನ್ನು ಯಾವ ಯಾವ ಇಲಾಖೆಗಳಿಗೆ ಎಷ್ಟೆಷ್ಟು ವಿತರಣೆ ಮಾಡಲಾಗಿದೆ;

ಇ) ಈ ಹಣದಲ್ಲಿ ಖರ್ಚಾಗಿರುವ ಹಣವೆಷ್ಟು; (ಇಲಾಖಾವಾರು ವಿವರ ನೀಡುವುದು)

ಈ) ಬಿಜಾಪುರ ಜಿಲ್ಲೆಯಲ್ಲಿನ ವಿವಿಧ ಇಲಾಖೆಗಳಿಗೆ ನೀಡಲಾದ ಹಣ ಹಾಗೂ ಇಲ್ಲಿಯವರೆಗೆ ಖರ್ಚು ಮಾಡಲಾದ ಹಣದ ವಿವರ ನೀಡುವುದು ?

ಶ್ರೀ ಬಾಲಚಂದ್ರ ಬಿ. ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು).–

ಅ) 2006–07ನೇ ಸಾಲಿಗೆ ವಿಶೇಷ ಕೇಂದ್ರೀಯ ನೆರವಿನಡಿ ಕೇಂದ್ರ ಸರ್ಕಾರದಿಂದ ಪರಿಶಿಷ್ಟ ಜಾತಿಯವರ ಆರ್ಥಿಕ ಅಭಿವೃದ್ಧಿಗಾಗಿ ರೂ. 2260.90 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.

ಆ) 2006–07ನೇ ಸಾಲಿಗೆ ವಿಶೇಷ ಕೇಂದ್ರೀಯ ನೆರವಿನಡಿ ಅನುಷ್ಠಾನಗೊಳಿಸಿರುವ ಕಾರ್ಯಕ್ರಮಗಳ ವಿವರಗಳನ್ನು ಅನುಬಂಧ–1ರಲ್ಲಿ ನೀಡಲಾಗಿದೆ

ಇ) 2006–07ನೇ ಸಾಲಿನಲ್ಲಿ ಈವರೆವಿಗೆ ಖರ್ಚಾಗಿರುವ ಅನುದಾನದ ವಿವರಗಳನ್ನು ಅನುಬಂಧ–1ರಲ್ಲಿ ನೀಡಲಾಗಿದೆ.

ಈ) ಬಿಜಾಪುರ ಜಿಲ್ಲೆಯಲ್ಲಿ ವಿಶೇಷ ಕೇಂದ್ರೀಯ ನೆರವಿನಡಿ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳ ಮೂಲಕ ಅನುಷ್ಠಾನಗೊಳಿಸಿದ ಕಾರ್ಯಕ್ರಮಗಳ ವಿವರ ಈ ಕೆಳಕಂಡಂತಿದೆ ;

(ಲಕ್ಷ ರೂ.ಗಳಲ್ಲಿ)

	ಕಾರ್ಯಕ್ರಮದ ವಿವರ	ಬಿಡುಗಡೆಯಾದ ಅನುದಾನ	ಖರ್ಚಾದ ವಿವರ
1.	ಸ್ವಯಂ ಉದ್ಯೋಗ	17.10	17.10
2.	ಪಶುಸಂಗೋಪನೆ	32.30	32.30
3.	ಮೂಲಭೂತ ಸೌಕರ್ಯ	20.04	20.04
	ಒಟ್ಟು	69.44	69.44

ಅನುಬಂಧ–1

ಸಮಾಜ ಕಲ್ಯಾಣ ಇಲಾಖೆ ಮುಖಾಂತರ 2006–07ನೇ ಸಾಲಿನಲ್ಲಿ ವಿಶೇಷ ಕೇಂದ್ರೀಯ ನೆರವಿನಡಿ ಅನುಷ್ಠಾನಗೊಳಿಸಿದ ಕಾರ್ಯಕ್ರಮಗಳ ವಿವರ

ಕ್ರ.ಸಂ.	ಇಲಾಖೆ/ಕಾರ್ಯಕ್ರಮಗಳ ವಿವರ	ವಿಶೇಷ ಕೇಂದ್ರೀಯ ನೆರವಿನಡಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನ	ಖರ್ಚು
1.	ಪಶು ಸಂಗೋಪನೆ	518.10	518.10
2.	ನರ್ಸಿಂಗ್ ತರಬೇತಿ	422.60	422.60
3.	ದೌರ್ಜನ್ಯದಲ್ಲಿ ನೊಂದ ಸಂತ್ರಸ್ತರಿಗೆ ಪರಿಹಾರ	50.00	--
4.	ಪರಿಶಿಷ್ಟ ಜಾತಿ ಜನಾಂಗದವರು ವಾಸಿಸುವ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯ ಒದಗಿಸುವುದು	550.0855	550.0855
5.	ಸ್ವಯಂ ಉದ್ಯೋಗ	287.00	287.00
6.	ನ್ಯಾಷನಲ್ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ ಮುಖಾಂತರ ತರಬೇತಿ	100.00	---

7. ಸರ್ಕಾರಿ ಉಪಕರಣಾಗಾರ & ತರಬೇತಿ ಕೇಂದ್ರದ ಮುಖಾಂತರ ತರಬೇತಿ ಕಾರ್ಯಕ್ರಮ	265.2935	265.2935
8. ಆಡಳಿತ ವೆಚ್ಚ	67.821	67.821
ಒಟ್ಟು	2260.90	2110.90

1. ನ್ಯಾಷನಲ್ ಇನ್ಸ್‌ಟಿಟ್ಯೂಟ್ ಆಫ್ ಫ್ಯಾಷನ್ ಟೆಕ್ನಾಲಜಿ ಸಂಸ್ಥೆಗೆ ಅಭ್ಯರ್ಥಿಗಳನ್ನು ನಿಯೋಜಿಸಿದ್ದು ಹಾಜರಾತಿ ನೋಡಿಕೊಂಡು ಹಣ ಪಾವತಿಸಲಾಗುವುದು.

2. ದೌರ್ಜನ್ಯದಲ್ಲಿ ನೊಂದ ಸಂತ್ರಸ್ತರಿಗೆ ಪ್ರಕರಣಗಳಿಗೆ ಸಂಬಂಧಿಸಿದಂತೆ ರೂ. 19.00 ಲಕ್ಷಗಳ ಪ್ರಸ್ತಾವನೆ ಮಂಜೂರು ಮಾಡಲು ಕ್ರಮವಹಿಸಿದೆ.

ಆಯುಕ್ತರು
ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು

1101 (1264) ಶ್ರೀ ಚನ್ನಬಸವರಾಜ್ (ಅಪ್ಪಾಜಿ) ಶಂಕರರಾವ್ ನಾಡಗೌಡ (ಮುದ್ದೇಬಿಹಾಳ).– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.–

ಅ) ಬಿಜಾಪುರ ಜಿಲ್ಲಾ ಆಸ್ಪತ್ರೆಯಲ್ಲಿ ಮೂಲಭೂತ ಸೌಕರ್ಯ, ಅತ್ಯಾಧುನಿಕ ಉಪಕರಣಗಳು ಇತ್ಯಾದಿಗಳಿಗೆ 2005–06 ಹಾಗೂ 2006–07ರಲ್ಲಿ ಖರ್ಚು ಮಾಡಿದ ಹಣವೆಷ್ಟು ;

ಆ) ಈ ಆಸ್ಪತ್ರೆಯಲ್ಲಿ ವೈದ್ಯರು ಹಾಗೂ ಇತರ ಸಿಬ್ಬಂದಿಗಳ ಕೊರತೆ ಇದೆಯೇ ;

ಇ) ಇದ್ದಲ್ಲಿ ಈ ಖಾಲಿ ಇರತಕ್ಕಂಥ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡ ಕ್ರಮಗಳೇನು ;

ಈ) 2007–08ರಲ್ಲಿ ಮೇಲ್ಕಂಡ ಆಸ್ಪತ್ರೆಗೆ ಒದಗಿಸಲಿರುವ ಸೌಲಭ್ಯಗಳೇನು ?

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು).–

ಅ) ಬಿಜಾಪುರ ಜಿಲ್ಲಾ ಆಸ್ಪತ್ರೆಯಲ್ಲಿ ಮೂಲಭೂತ ಸೌಕರ್ಯಕ್ಕಾಗಿ 2005–06 ರಲ್ಲಿ ರೂ. 46,72,125/– ಹಾಗೂ 2006–07 ರಲ್ಲಿ ರೂ. 15,97,936/– ಹಣವನ್ನು ಖರ್ಚು ಮಾಡಲಾಗಿದೆ. ಅತ್ಯಾಧುನಿಕ ಉಪಕರಣಗಳಿಗಾಗಿ 2005–06 ರಲ್ಲಿ ರೂ. 92,10,538/– ಹಾಗೂ 2006–07 ರಲ್ಲಿ ರೂ. 1,46,640/– ಹಣವನ್ನು ಖರ್ಚು ಮಾಡಲಾಗಿದೆ.